ಕರ್ನಾಟಕ ಸರ್ಕಾರ

**ಸಂಖ್ಯೆ:** ಕಂಇ 6 ಮುನೋಮು 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24-01-2013

ಇವರಿಂದ:
ಸರ್ಕಾರದ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು.

ಇವರಿಗೆ:
ನೋಂದಣಿ ಮಹಾಪರಿವೀಕ್ಷಕರು ಹಾಗೂ
ಮುದ್ರಾಂಕಗಳ ಆಯುಕ್ತರು,
ಕಂದಾಯ ಭವನ,
ಕೆ.ಜಿ.ರಸ್ತೆ,
ಬೆಂಗಳೂರು.

ಮಾನ್ಯರೆ,

ವಿಷಯ: ಮಾನ್ಯ ಉಚ್ಚ ನ್ಯಾಯಾಲಯದ ಆದೇಶದನ್ವಯ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008ನ್ನು ತಿದ್ದುಪಡಿ ಮಾಡುವ ಕುರಿತು.

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008 ದಿನಾಂಕ: 06.04.2009 ಮತ್ತು 12.08.2009.
2) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸುತ್ತೋಲೆ ಸಂಖ್ಯೆ:ಗ್ರಾಅಪ 553 ಗ್ರಾಪಂಅ 2012 ದಿನಾಂಕ: 04.01.2013.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆಗಳತ್ತ ತಮ್ಮ ಗಮನ ಸೆಳೆಯುತ್ತಾ, ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಕಂಇ 6 ಮುನೋಮು 2013 ದಿನಾಂಕ: 24.01.2013ನ್ನು ಇದರೊಂದಿಗೆ ಲಗತ್ತಿಸಲಾಗಿದೆ. ನಕಲಿ ಹಾಗೂ ಖೊಟ್ಟ ದಾಖಲೆಗಳ ಆಧಾರದ ಮೇಲೆ ಆಗುತ್ತಿರುವ ನೋಂದಣಿಗೆ ಸಂಬಂಧಿಸಿದಂತೆ, ದಾಖಲೆಗಳ ನೈಜತೆಯನ್ನು ಪರಿಶೀಲಿಸಲು ಸಕ್ಷಮ ಪ್ರಾಧಿಕಾರಿ (ಗ್ರಾಮ ಪಂಚಾಯಿತಿ ಅಧಿಕಾರಿ / ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿ) ಉಪನೋಂದಣಾಧಿಕಾರಿಯವರ ಗಮನಕ್ಕೆ ತಂದಾಗ, ಉಪನೋಂದಣಾಧಿಕಾರಿಗಳು ಅವುಗಳನ್ನು ಪರಿಶೀಲಿಸಿ ತುರ್ತಾಗಿ ನೋಂದಣಿ ಅಧಿನಿಯಮದ ಕಲಂ 82ರಡಿ ಕಲಂ 83ರೊಂದಿಗೆ ಓದಲಾದಂತೆ ಕ್ರಮ ಕೈಗೊಳ್ಳುವಂತೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಟಿ.ಕೆ.ರಾಮಚಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ನೋಂದಣಿ ಮತ್ತು ಮುದ್ರಾಂಕ)

## ಕರ್ನಾಟಕ ಸರ್ಕಾರ

ಸಂಖ್ಯೆ:ಕಂಇ 6 ಮುನೋಮು 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24.01.2013.

### ತಿದ್ದುಪಡಿ

ಕಂದಾಯ ಇಲಾಖೆಯ ಸುತ್ತೋಲೆ ಸಂಖ್ಯೆ: ಕಂಇ 344 ಮುನೋಮು 2008 ದಿನಾಂಕ:06.04.2009ರ ಅನುಬಂಧ -I ಮತ್ತು V ರಲ್ಲಿ 'ನಮೂನೆ 1 ಮತ್ತು 12' ಎಂದು ನಮೂದಿಸಲಾಗಿರುವ ಸ್ಥಳದಲ್ಲಿ 'ನಮೂನೆ 9 ಮತ್ತು 11' ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಸ್ಪಷ್ಟೀಕರಣ:

1. 'ನಮೂನೆ 9 ಮತ್ತು 11' ಎಂದು ನಮೂದಾಗಿರುವುದರಿಂದ ನೋಂದಣಿಗಾಗಿ ಎರಡೂ ದಾಖಲೆಗಳ ಅವಶ್ಯವಿರುತ್ತದೆ.
2. 'ನಮೂನೆ 9 ಮತ್ತು 11' ಕರ್ನಾಟಕ ಸರ್ಕಾರವು ಕಾಲಕಾಲಕ್ಕೆ ರಚಿಸಿರುವ ಕರ್ನಾಟಕ ಪಂಚಾಯತ್ ರಾಜ್ (ಆಯವ್ಯಯ ಮತ್ತು ಲೆಕ್ಕಪತ್ರ) ನಿಯಮಗಳಲ್ಲಿ ನಿಗದಿ ಪಡಿಸಿರುವ ರೀತಿ ಮತ್ತು ಸ್ವರೂಪದಲ್ಲಿರಬೇಕು.
3. ನೋಂದಣಿಗೆ ಒಳಪಡುವ ದಸ್ತಾವೇಜಿನ ಆಸ್ತಿಗಳ ವಿವರ ಹಾಗೂ 'ನಮೂನೆ 9 ಮತ್ತು 11'ರಲ್ಲಿ ನಮೂದಿಸಿರುವ ವಿವರಕ್ಕೆ ಹೊಂದಾಣಿಕೆ ಇರಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಕೆ.ರಾಮಚಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ.
(ನೋಂದಣಿ ಮತ್ತು ಮುದ್ರಾಂಕ)

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 1000 ಪ್ರತಿಗಳನ್ನು ಕಂದಾಯ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:
1) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂ.
3) ಅಭಿವೃದ್ಧಿ ಆಯುಕ್ತರು ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಾರ್ವಜನಿಕ ಉದ್ದಿಮೆಗಳ ಇಲಾಖೆ.
6) ಸರ್ಕಾರದ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.

8) ನಿರ್ದೇಶಕರು, ನಗರ ಯೋಜನಾ ಪ್ರಾಧಿಕಾರ, ಬೆಂಗಳೂರು.
9) ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು, ಬೆಂಗಳೂರು.
10) ಮಾನ್ಯ ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ.
11) ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರು.
12) ನಿರ್ದೇಶಕರು, ಭೂ ಮಾಪನ ಹಾಗೂ ಭೂ ದಾಖಲೆಗಳ ಇಲಾಖೆ, ಬೆಂಗಳೂರು.
13) ಎಲ್ಲಾ ಜಿಲ್ಲಾಧಿಕಾರಿಗಳು.
14) ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
15) ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳ ಕಛೇರಿಗಳಿಗೆ – ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರ ಮುಖಾಂತರ.
16) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
17) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
18) ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರು.
19) ಎಲ್ಲಾ ನಗರ ಪಾಲಿಕೆ ಆಯುಕ್ತರು.
20) ಎಲ್ಲಾ ನಗರ ಸಭೆ ಆಯುಕ್ತರು.
21) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
22) ಸರ್ಕಾರದ ಕಾರ್ಯದರ್ಶಿಗಳು(ವಿಪತ್ತು ನಿರ್ವಹಣೆ), ಕಂದಾಯ ಇಲಾಖೆ ಇವರ ಪತ್ರಾಂಕಿತ ಆಪ್ತ ಸಹಾಯಕರು.
23) ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಸಹಾಯಕರು.
24) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.